ದಿನಾಂಕ: 09.03.2021 ರಂದು ಬೆಳಗ್ಗೆ 11.00 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸೋಮಶೇಖರ್.ಬಿ.ಎಲ್, ಸಹಾಯಕ ಅಭಿಯಂತರರು,
3. ಶ್ರೀ ನಾಗರಾಜ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ ಸತೀಶ್ ನಾಯಕ್, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5. ಶ್ರೀ ಪರಶುರಾಂ, ಕಿರಿಯ ಅಭಿಯಂತರರು , ಬೆಸ್ಕಾಂ
6. ಶ್ರೀ ಜಿ.ಟಿ. ಲೋಕೇಶ್, ಮೌಲ್ಯಮಾಪಕರು, ಕಂದಾಯ ಇಲಾಖೆ.
7. ಶ್ರೀ ಪರಮೇಶ್, ಎ.ಎ. ಉಪತಹಶೀಲ್ದಾರ್ ಕಛೇರಿ
8. ಶ್ರೀ ರಮೇಶ್, ಪಶು ಸಂಗೋಪನ ಇಲಾಖೆ.
9. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
15. ಶ್ರೀ ಶ್ರೀನಿವಾಸ್.ಎನ್. ಸದಸ್ಯರು
16. ಶ್ರೀ ಉಮೇಶ್, ಸದಸ್ಯರು,
17. ಶ್ರೀ ರಾಜಣ್ಣ, ಸದಸ್ಯರು
18. ಶ್ರೀ ಆನಂದ್, ಸದಸ್ಯರು

ದಿನಾಂಕ: 09.03.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಹಿಂದಿನ ಸಭೆಯ ನಡವಳಿಯ ಪಟ್ಟಿಯನ್ನು ಸಭೆಗೆ ಮಂಡಿಸಲಾಯಿತು.
2. ಹಿಂದಿನ ಸಭೆಯಲ್ಲಿ ತೆಗೆದುಕೊಂಡ ನಡವಳಿಗಳ ಅನುಷ್ಠಾನದ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.
3. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ಅರಣ್ಯ ಇಲಾಖೆಯವರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಬರುವ ಮರದ ಬುಡಗಳು ಹಾಗೂ ಒಣಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸಲು ಈ ಹಿಂದಿನ ಸಭೆಯಲ್ಲಿ ತಿಳಿಸಲಾಗಿತ್ತು. ಆದರೆ ಇದುವರೆವಿಗೂ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲವೆಂದು ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಅರಣ್ಯ ಇಲಾಖೆಯವರು ಒಂದು ವಾರದೊಳಗೆ ಎಲ್ಲಾ ಒಣಗಿರುವ ಮರದ ಕೊಂಬೆಗಳು ಮತ್ತು ಮರದ ಬುಡಗಳನ್ನು ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.
4. ಶ್ರೀ ರಮೇಶ್, ಹಿರಿಯ ನಿರೀಕ್ಷಕರು, ಪಶು ಸಂಗೋಪನೆ ಇಲಾಖೆ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹಿಡಿಯುವ ನಾಯಿಗಳಿಗೆ ವ್ಯಾಕ್ಸಿನೇಷನ್ ಮತ್ತು ಸಂತಾನ ಹರಣ ಚಿಕಿತ್ಸೆ ನೀಡಿ ಮತ್ತೇ ಅದೇ ಸ್ಥಳದಲ್ಲಿ ಬಿಡಬೇಕೆಂದು ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವಾಗಿರುವುದರಿಂದ ಬೇರೆ ಯಾವ ಸ್ಥಳಕ್ಕು ಸ್ಥಳಾಂತರಿಸಲು ಅವಕಾಶವಿರುವುದಿಲ್ಲವೆಂದು ಸಭೆಗೆ ತಿಳಿಸಿದರು.
5. ವಾರ್ಡ್ ಕಮಿಟಿ ಸದಸ್ಯರಾದ ಶ್ರೀ ರಾಜಣ್ಣ ರವರು ಮಾತನಾಡುತ್ತಾ, ಪಶ್ಚಿಮ ಕಾರ್ಡ್ ರಸ್ತೆಯಲ್ಲಿರುವ ಕೋಳಿ ಅಂಗಡಿ ಮಾಲೀಕರು ಅಂಗಡಿಯಲ್ಲಿ ಉತ್ಪತ್ತಿಯಾಗುವ ಪ್ರಾಣಿಗಳ ತ್ಯಾಜ್ಯವನ್ನು ದೊಡ್ಡ ಮಳೆನೀರು ಚರಂಡಿಗೆ ಹಾಕುತ್ತಿರುವುದರಿಂದ ಸದರಿ ಅಂಗಡಿ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕಾಗಿ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಹಿರಿಯ ನಿರೀಕ್ಷಕರು , ಪಶು ಸಂಗೋಪನಾ ಇಲಾಖೆ ರವರು ಮಾತನಾಡುತ್ತಾ, ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
6. ಶ್ರೀ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕದ ಮೇಲೆ ಪಾಲಿಕೆ ಸದಸ್ಯರು ಹಾಗೂ ಶಾಸಕರ ಭಾವ ಚಿತ್ರಗಳು ಕಂಡು ಬಂದಿದ್ದು, ಸದರಿ ಭಾವ ಚಿತ್ರಗಳನ್ನು ತೆರವುಗೊಳಿಸಲು ಮಾನ್ಯ ಉಚ್ಚ ನ್ಯಾಯಾಲಯದ ಆದೇಶವಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಯ ನಾಮಫಲಕಗಳು, ಆಟದ ಮೈದಾನಗಳು ಮತ್ತು ಶುದ್ಧ ಕುಡಿಯುವ ನೀರಿನ ಘಟಕದ ಮೇಲೆ ಇರುವ ಭಾವ ಚಿತ್ರಗಳನ್ನು ತೆರವುಗೊಳಿಸಲು ವಾರ್ಡ್ ಸಹಾಯಕ ಅಭಿಯಂತರರು ಗಳಿಗೆ ತಿಳಿಸಿದರು.

Scanned by CamScanner

7. ಶ್ರೀ ಉಮೇಶ್, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 9ನೇ ಹಾಗೂ 10ನೇ ಮುಖ್ಯ ರಸ್ತೆ, ಮತ್ತು 39, 40ನೇ ಅಡ್ಡ ರಸ್ತೆಯಲ್ಲಿ ನೀರಿನ ಸರಬರಾಜು ಸರಿಯಾಗಿ ಆಗದೇ ಇರುವುದರಿಂದ ಸ್ಥಳೀಯ ನಿವಾಸಿಗಳಿಗೆ ನೀರಿನ ಅಭಾವವಾಗುತ್ತಿರುವುದಾಗಿ ಅನೇಕ ದೂರುಗಳು ಬರುತ್ತಿರುತ್ತವೆ ಎಂದು ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.
8. ಶ್ರೀ ಶ್ರೀನಿವಾಸ, ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 1ನೇ ಮುಖ್ಯ ರಸ್ತೆ, ಮಂಜುನಾಥನಗರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿರುವ ಆಸ್ಪತ್ರೆ ಸಿಬ್ಬಂದಿಗಳು ಬರುವ ರೋಗಿಗಳೊಂದಿಗೆ ಸರಿಯಾಗಿ ಸ್ಪಂದಿಸುತ್ತಿರುವುದಿಲ್ಲವೆಂದು ಅನೇಕ ದೂರುಗಳು ಬರುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಸಭೆಯಲ್ಲಿ ಹಾಜರಿದ್ದ ವೈದ್ಯರಿಗೆ ಆಸ್ಪತ್ರೆಗೆ ಬರುವ ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಿ, ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಿ, ಅವರ ಕಷ್ಟಗಳಿಗೆ ಸ್ಪಂದಿಸಬೇಕೆಂದು ಸಭೆಯಲ್ಲಿ ತಿಳಿಸಿದರು.
9. ಡಾ: ಎಂ.ಕೆ. ಪುಷ್ಪಿತ, ವೈದ್ಯಾಧಿಕಾರಿಗಳು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಒಂದು ದಿನಕ್ಕೆ 1 ರಿಂದ 2 ಕೋವಿಡ್ ಪ್ರಕರಣಗಳು ಕಂಡು ಬರುತ್ತಿವೆ ಮತ್ತು ಈಗಾಗಲೇ ಹಿರಿಯ ನಾಗರೀಕರಿಗೆ ಕೋವಿಡ್ ಲಸಿಕೆಯನ್ನು ನೀಡಲಾಗುತ್ತಿರುತ್ತದೆ. ಎಂದು ಸಭೆಗೆ ಮಾಹಿತಿಯನ್ನು ನೀಡಿದರು.
10. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಮಂಜುನಾಥನಗರದಲ್ಲಿರುವ ಇಂದಿರಾ ಕ್ಯಾಂಟೀನ್ ಹತ್ತಿರದಲ್ಲಿರುವ ಮೊಟ್ಟೆ ಅಂಗಡಿ ಮಾಲೀಕರು ಹಾಳಾಗಿರುವ ಮೊಟ್ಟೆಗಳನ್ನು ರಸ್ತೆಯಲ್ಲಿ ಹಾಕುತ್ತಿರುವುದರಿಂದ ಮತ್ತು ಪ್ರತಿ ದಿನ ರಾತ್ರಿ 12.00 ಗಂಟೆ ಸಮಯದಲ್ಲಿ ಮೊಟ್ಟೆಗಳನ್ನು ಅನ್ ಲೋಡ್ ಮಾಡುತ್ತಿರುವುದರಿಂದ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ಅನೇಕ ದೂರುಗಳು ಬರುತ್ತಿರುವುದರಿಂದ ಸದರಿ ಅಂಗಡಿ ಮಾಲೀಕರಿಗೆ ದಂಡವನ್ನು ವಿಧಿಸಲು ಸಭೆಯಲ್ಲಿ ಹಾಜರಿದ್ದ ಪಶುಸಂಗೋಪನಾ ಇಲಾಖೆ ನಿರೀಕ್ಷಕರು ತಿಳಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

ನೋಡಲ್ ಅಧಿಕಾರಿಗಳು
ವಾರ್ಡ್ ನಂ: 99

Scanned by CamScanner